**Akashvani : Bangalore**
**Regional Bulletin In Kannada**
**11.10.2024 / 18.40 hrs**

ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

**೧. ಸಾಂಸ್ಕೃತಿ ನಗರಿ ಮೈಸೂರಿನಲ್ಲಿ ಕಳೆಗಟ್ಟಿದ ದಸರಾ ಸಡಗರ; ನಾಳೆ ವಿಶ್ವ ವಿಖ್ಯಾತ ಅದ್ದೂರಿ ಜಂಬೂ ಸವಾರಿ**

**೨. ಸಾರವರ್ಧಿತ ಪಡಿತರ ಅಕ್ಕಿ ವಿತರಣೆಗೆ ಕೇಂದ್ರ ಸರ್ಕಾರ ನಿರ್ಧಾರ**

**೩. ಕೆಲವು ಮೊಕದ್ದಮೆಗಳನ್ನು ವಾಪಸ್ ಪಡೆಯುವ ಅಧಿಕಾರ ಸರ್ಕಾರಕ್ಕಿದೆ- ಮುಖ್ಯಮಂತ್ರಿ ಸಿದ್ದರಾಮಯ್ಯ**

**೪. ಈ ಬಾರಿ ಅದ್ದೂರಿ ಕನ್ನಡ ರಾಜ್ಯೋತ್ಸವ ಆಚರಣೆಗೆ ರಾಜ್ಯ ಸರ್ಕಾರ ನಿರ್ಧಾರ; ಎಲ್ಲಾ ಕಚೇರಿಗಳಲ್ಲಿ ಕನ್ನಡ ಬಾಹುಟ ಹಾರಿಸುವುದು ಕಡ್ಡಾಯ**

**<><*<><>*><>**

ಸಾಂಸ್ಕೃತಿಕ ನಗರಿ ಮೈಸೂರಿನಲ್ಲಿ ದಸರಾ ಸಂಭ್ರಮ ಕಳೆಗಟ್ಟಿದೆ. ಪ್ರಮುಖ ಆಕರ್ಷಣೆಯಾದ ಜಂಬೂ ಸವಾರಿ ನಾಳೆ ನಡೆಯಲಿದ್ದು, ಜಿಲ್ಲಾಡಳಿತ ಅಂತಿಮ ಹಂತದ ಸಿದ್ಧತೆ ಪೂರ್ಣಗೊಳಿಸಿದೆ. ನಾಳೆ ಮಧ್ಯಾಹ್ನ ೧.೪೧ ರಿಂದ ೨.೧೦ ರವರೆಗೆ ಅರಮನೆ ಬಲರಾಮ ಧ್ವಾರದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ನಂದಿ ಧ್ವಜ ಪೂಜೆ ನೆರವೇರಿಸಲಿದ್ದಾರೆ. ಸಂಜೆ ೪ ಗಂಟೆಯಿಂದ ೪.೩೦ರವರೆಗೆ ಅರಮನೆ ಆವರಣದಲ್ಲಿ ೭೫೦ ಕೆಜಿ ತೂಕದ ಚಿನ್ನದ ಅಂಬಾರಿಯಲ್ಲಿ ವಿರಾಜಮಾನಗೊಂಡ ಚಾಮುಂಡೇಶ್ವರಿ ದೇವಿಗೆ ಮುಖ್ಯಮಂತ್ರಿಗಳು ಪುಷ್ಪಾರ್ಚನೆ ಮಾಡಲಿದ್ದಾರೆ. ರಾಜವಂಶಸ್ಥ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ಸಚಿವರು ಪಾಲ್ಗೊಳ್ಳಲಿದ್ದಾರೆ. ಸಂಜೆ ನಡೆಯಲಿರುವ ಪಂಜಿನ ಕವಾಯತಿನಲ್ಲಿ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಗೌರವ ವಂದನೆ ಸ್ವೀಕರಿಸಲಿದ್ದಾರೆ. ದಸರಾ ವೈಭವ ಕಣ್ತುಂಬಿಕೊಳ್ಳಲು ದೇಶ-ವಿದೇಶಗಳಿಂದ ಸಾಂಸ್ಕೃತಿಕ ನಗರಿ ಮೈಸೂರಿಗೆ ಲಕ್ಷಾಂತರ ಪ್ರವಾಸಿಗರು ಆಗಮಿಸಿದ್ದಾರೆ. ಮುನ್ನೆಚ್ಚರಿಕಾ ಕ್ರಮವಾಗಿ ನಗರದಲ್ಲಿ ಬಿಗಿಬಂದೋಬಸ್ತ್ ಏರ್ಪಡಿಸಲಾಗಿದೆ.

**<><*<><>*><>**

ಮೈಸೂರು ಅರಮನೆಯಲ್ಲಿ ಶರನ್ನವರಾತ್ರಿಯ ೯ನೇ ದಿನವಾದ ಇಂದು ಸಾಂಪ್ರದಾಯಿಕವಾಗಿ ಆಯುಧಪೂಜೆ ನೆರವೇರಿತು. ಮಹಾರಾಜ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಆಯುಧಪೂಜೆ ನೆರವೇರಿಸಿದ್ದು, ಅರಮನೆ ಮುಂಭಾಗದಲ್ಲಿ ಪಟ್ಟದ ಹಸು, ಆನೆ, ಕುದುರೆ, ಒಂಟೆಗಳಿಗೆ, ಪಲ್ಲಕ್ಕಿ ಹಾಗೂ ರಾಜರ ಕಾರುಗಳಿಗೆ ಪೂಜೆ ಸಲ್ಲಿಸಿದರು. ಅರಮನೆಯ ಪೂರ್ವಜರು ಬಳಸುತ್ತಿದ್ದ ಆಯುಧಗಳನ್ನು ಸ್ವಚ್ಛಗೊಳಿಸಿ, ಅವುಗಳಿಗೂ ಪೂಜೆ ನೆರವೇರಿಸಲಾಯಿತು. ಇನ್ನೊಂದೆಡೆ ಜಂಬೂ ಸವಾರಿಯಲ್ಲಿ ಪಾಲ್ಗೊಳ್ಳಲಿರುವ ಆನೆಗಳಿಗೂ ಪೂಜೆ ಸಲ್ಲಿಸಲಾಯಿತು.

**<><*<><>*><>**

ಮುಂದಿನ ದಿನಗಳಲ್ಲಿ ಕೇಂದ್ರ ಸರ್ಕಾರ ವಿತರಿಸುವ ಪಡಿತರ ಅಕ್ಕಿಗೆ ಶೇಕಡ ೧ ರಷ್ಟು ಪೌಷ್ಠಿಕಾಂಶ ಸೇರಿಸಲಾಗುತ್ತದೆ ಎಂದು ಕೇಂದ್ರ ಸಚಿವ ಆಹಾರ ಸಚಿವ ಪ್ರಲ್ಹಾದ್ ಜೋಶಿ ತಿಳಿಸಿದ್ದಾರೆ. ಹುಬ್ಬಳ್ಳಿಯಲ್ಲಿಂದು ಮಾತನಾಡಿದ ಅವರು, "ರಕ್ತಹೀನತೆಯನ್ನು ಹೋಗಲಾಡಿಸಲು ಪೌಷ್ಠಿಕಾಂಶಯುಕ್ತ ಹಾಗೂ ಸಾರವರ್ಧಿತ ಅಕ್ಕಿ ವಿತರಣೆಗೆ ಕೇಂದ್ರ ಸರ್ಕಾರ ಮುಂದಾಗಿದೆ. ಗರೀಬ್ ಕಲ್ಯಾಣ ಮತ್ತು ಅಂತ್ಯೋದಯ ಅನ್ನ ಯೋಜನೆಯಡಿ ವಿತರಿಸುವ ಅಕ್ಕಿಗೆ ಶೇಕಡ ೧ರಷ್ಟು ಪೌಷ್ಠಿಕಾಂಶ ಸೇರಿಸಲಾಗುವುದು" ಎಂದು ಹೇಳಿದರು. ೫ ವರ್ಷಗಳ ಕಾಲ ಬಲವರ್ಧಿತ ಅಕ್ಕಿ ವಿತರಣೆಗೆ ಅನುಮೋದನೆ ನೀಡಲಾಗಿದೆ. ದೇಶಾದ್ಯಂತ ಈ ಪೌಷ್ಠಿಕಾಂಶಯುಕ್ತ ಅಕ್ಕಿ ವಿತರಣೆ ಯೋಜನೆಗೆ ೧೮ ಸಾವಿರ ಕೋಟಿ ರೂಪಾಯಿ ವೆಚ್ಚವಾಗಲಿದೆ ಎಂದು ಸಚಿವರು ಸ್ಪಷ್ಟಪಡಿಸಿದ್ದಾರೆ.

ಇದೇ ವೇಳೆ ಹಳೆ ಹುಬ್ಬಳ್ಳಿ ಪೊಲೀಸ್ ಠಾಣೆ ಮತ್ತು ಸಿಬ್ಬಂದಿಯ ಮೇಲೆ ಹಲ್ಲೆ ನಡೆದ ಪ್ರಕರಣಕ್ಕೆ ಸಂಬಂಧಿಸಿದಂತೆ ಬಂಧಿಸಲಾಗಿದ್ದ ೧೫೫ ಆರೋಪಿಗಳನ್ನು ರಾಜ್ಯ ಸರ್ಕಾರ ಬಿಡುಗಡೆ ಮಾಡಲು ತೀರ್ಮಾನ ಕೈಗೊಂಡಿರುವುದಕ್ಕೆ ಸಚಿವರು ಆಕ್ಷೇಪ ವ್ಯಕ್ತಪಡಿಸಿದ್ದಾರೆ.

<><*<><>*><>

ಆರೋಗ್ಯಕರ ಚರ್ಚೆ ಟೀಕೆಗಳಿಂದ ಪ್ರಜಾಪ್ರಭುತ್ವ ಯಶಸ್ವಿಯಾಗುತ್ತದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಮೈಸೂರಿನಲ್ಲಿಂದು ಮಾತನಾಡಿದ ಅವರು, ತಾಯಿ ಚಾಮುಂಡೇಶ್ವರಿ ಕೃಪೆ ತಮ್ಮ ಮೇಲೆ ಸದಾ ಇರುವ ಕಾರಣದಿಂದ ಸುದೀರ್ಘ ಪುಷ್ಪಾರ್ಚನೆಗೆ ಅವಕಾಶ ಸಿಕ್ಕಿದೆ ಎಂದು ಹೇಳಿದ್ದಾರೆ. ೨೦೨೨ರ ಹುಬ್ಬಳಿ ಗಲಭೆ ಪ್ರಕರಣದ ಮೊಕದ್ದಮೆ ವಾಪಸ್ ಪಡೆಯುವ ಕುರಿತಂತೆ ಬಿಜೆಪಿ ಹೋರಾಟ ಕುರಿತು ಪ್ರತಿಕ್ರಿಯಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಕೆಲ ಮೊಕದ್ದಮೆಗಳ ಬಗ್ಗೆ ಸೂಕ್ತ ನಿರ್ಧಾರ ತೆಗೆದುಕೊಳ್ಳುವ ಅಧಿಕಾರ ಸಚಿವ ಸಂಪುಟದ ಉಪಸಮಿತಿಗಿರುತ್ತದೆ ಎಂದು ಸಮರ್ಥಿಸಿಕೊಂಡಿದ್ದಾರೆ. ಬಿಜೆಪಿ ಹೋರಾಟ ಸುಳ್ಳು ವಿಚಾರಗಳನ್ನು ಆಧರಿಸಿ ಇರುತ್ತದೆಯೇ ಹೊರತು ಸತ್ಯದ ಪರವಾಗಿ ಇರುವುದಿಲ್ಲ ಎಂದು ಹೇಳಿದ್ದಾರೆ.

<><*<><>*><>

ಕೋವಿಡ್ ಅಕ್ರಮದ ಬಗ್ಗೆ  ರಾಜ್ಯ ಸರ್ಕಾರ ಎಸ್ ಐಟಿ ತನಿಖೆ ನಡೆಸಲು ಮುಂದಾಗಿದೆ. ಅಧಿಕಾರಕ್ಕೆ ಬಂದು ಒಂದು ವರ್ಷದ ಬಳಿಕ  ತನಿಖೆ ನಡೆಸುವ ಅಗತ್ಯವೇನಿದೆ ಎಂದು ಕೇಂದ್ರ ಭಾರೀ ಕೈಗಾರಿಕಾ ಸಚಿವ ಎಚ್.ಡಿ.ಕುಮಾರಸ್ವಾಮಿ ಪ್ರಶ್ನಿಸಿದ್ದಾರೆ. ಮೈಸೂರಿನ ಚಾಮುಂಡಿಬೆಟ್ಟದಲ್ಲಿ ದೇವಿ ದರ್ಶನ ಪಡೆದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸರ್ಕಾರ ತಾನು ಮಾಡಿರುವ ತಪ್ಪುಗಳನ್ನು ಮಾರೆಮಾಚಲು ಆಡಳಿತ ದುರುಪಯೋಗ ಪಡಿಸಿಕೊಂಡು ಜಾಹೀರಾತು ನೀಡಿ ಆಡಳಿತ ನಡೆಸುತ್ತಿದೆ ಎಂದು ವ್ಯಂಗ್ಯವಾಡಿದ್ದಾರೆ.

<><*<><>*><>

ನವೆಂಬರ್ ೧ ರಂದು ರಾಜ್ಯೋತ್ಸವವನ್ನು ಕಡ್ಡಾಯವಾಗಿ ಕನ್ನಡ ಧ್ವಜಾರೋಹಣ ಮಾಡುವ ಮೂಲಕ ಆಚರಿಸಬೇಕು ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಮಾತನಾಡಿದ ಅವರು, ಕನ್ನಡದ ನೆಲದಲ್ಲಿ ಕನ್ನಡ ಕಲಿಯಬೇಕಾಗಿರುವುದು ಪ್ರತಿಯೊಬ್ಬರ ಕರ್ತವ್ಯ.  ಐಟಿ-ಬಿಟಿ ಸೇರಿದಂತೆ ಶಾಲಾ-ಕಾಲೇಜುಗಳಲ್ಲಿ ಕನ್ನಡ ರಾಜ್ಯೋತ್ಸವ ಆಚರಿಸುವಂತೆ ಸೂಚಿಸಿದ್ದಾರೆ. ಕಚೇರಿಗಳಲ್ಲಿ ಕನ್ನಡ ಬಾವುಟ ಕಡ್ಡಾಯ ಹಾರಿಸುವಂತೆ ತಿಳಿಸಿದ್ದಾರೆ. ಯಾವುದೇ ಕನ್ನಡಪರ ಸಂಘಟನೆಗಳು ಯಾವುದೇ ಸಂಸ್ಥೆಗೆ ಆಚರಣೆ ಬಗ್ಗೆ ಬೆದರಿಕೆ ಹಾಕುವಂತಿಲ್ಲ. ಒಂದು ವೇಳೆ ತೊಂದರೆ ನೀಡಿದರೆ ಕಾನೂನು ಕ್ರಮ ತೆಗೆದುಕೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ. ಬಳಿಕ ಕೊಡಗಿನಲ್ಲಿ ಪ್ರತಿಕ್ರಿಯಿಸಿರುವ ಹುಬ್ಬಳ್ಳಿ ಪ್ರಕರಣದ ಮೊಕದ್ದಮೆ ವಾಪಾಸ್ ಕುರಿತಂತೆ ಸರ್ಕಾರ ಕೈಗೊಂಡಿರುವ ನಿರ್ಧಾರವನ್ನು ಸಮರ್ಥಿಸಿಕೊಂಡಿದ್ದಾರೆ. ಕೆಲ ಬಿಜೆಪಿ ನಾಯಕರ ಮೇಲಿನ ಮೊಕದ್ದಮೆಗಳನ್ನು ವಾಪಸ್ ಪಡೆಯಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ. ರಾಜ್ಯಕ್ಕೆ ಕೆಟ್ಟ ಹೆಸರು ತರಲು ಪ್ರಯತ್ನಿಸುತ್ತಿರುವವರೆ ದುಷ್ಟ ಶಕ್ತಿಗಳು ಎಂದು ಸರ್ಕಾರದ ಜಾಹಿರಾತನ್ನು ಸಮರ್ಥಿಸಿಕೊಂಡಿದ್ದಾರೆ.

<><*<><>*><>

ಇದೇ ತಿಂಗಳು ೨೩ ರಿಂದ ಮೂರು ದಿನಗಳವರೆಗೆ ಅದ್ದೂರಿ ಕಿತ್ತೂರು ಉತ್ಸವಕ್ಕೆ ಸಕಲ ಸಿದ್ಧತೆಗಳನ್ನು ಮಾಡಿಕೊಳ್ಳಾಗಿದೆ ಎಂದು ಬೆಳಗಾವಿ ಜಿಲ್ಲಾಧಿಕಾರಿ ಮೊಹ್ಮದ್ ರೋಷನ್ ತಿಳಿಸಿದ್ದಾರೆ. ಬೆಳಗಾವಿಯಲ್ಲಿ ಇಂದು ಸುದ್ಧಿಗಾರರೊಂದಿಗೆ ಮಾತನಾಡಿದ ಅವರು, ಈ ಬಾರಿ ಕಿತ್ತೂರು ಒಳಗೊಂಡಂತೆ ಚನ್ನಮ್ಮನ ಜನ್ಮಸ್ಥಳ ಬೆಳಗಾವಿಯ ಕಾಕತಿ ಗ್ರಾಮದಲ್ಲಿ ಹಾಗೂ ಬೆಳಗಾವಿ ನಗರದಲ್ಲೂ ಉತ್ಸವದ ನಿಮಿತ್ಯ ವಿಶೇಷ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ.  ಸರ್ಕಾರ ೫ ಕೋಟಿ ರೂಪಾಯಿಗಳನ್ನು ಈಗಾಗಲೇ ಅನುದಾನ ನೀಡಿದೆ. ಉತ್ಸವ ಅತ್ಯಂತ ಸಂಭ್ರಮದಿಂದ ಆಚರಿಸಲು ೨೬ ಸಮಿತಿಗಳನ್ನು ರಚಿಸಲಾಗಿದೆ. ಮೂರು ನಾಲ್ಕು ದಿನಗಳವರೆಗೆ ನಡೆಯಲಿರುವ ವೈವಿದ್ಯಮಯ ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಹೆಸರಾಂತ ಕಲಾವಿದರು ಭಾಗವಹಿಸಲಿದ್ದಾರೆ ಎಂದು ತಿಳಿಸಿದರು.  ಕಿತ್ತೂರು ಉತ್ಸವದ ನಿಮಿತ್ತ ರಾಜ್ಯದಾದ್ಯಂತ ಸಂಚರಿಸುತ್ತಿರುವ ಕಿತ್ತೂರು ರಾಣಿ ಚೆನ್ನಮ್ಮ ಜ್ಯೋತಿಯು ಇದೇ ೧೩ರಂದು ಯಾದಗಿರಿ ಜಿಲ್ಲೆಗೆ ಆಗಮಿಸುತ್ತಿದ್ದು, ಅದ್ದೂರಿಯಾಗಿ ಸ್ವಾಗತಿಸಬೇಕು ಎಂದು ಯಾದಗಿರಿ ಜಿಲ್ಲಾಧಿಕಾರಿ ಡಾ.ಬಿ.ಸುಶೀಲಾ ಸೂಚಿಸಿದ್ದಾರೆ.

<><*<><>*><>

ಇನ್ನು ಸಂಕ್ಷಿಪ್ತ ಸುದ್ದಿಗಳು...

೧. ಬ್ಯಾಂಕುಗಳು ರೈತರ ಹಿತ ಕಾಪಾಡಬೇಕು. ಸಾಲ ಮರು ಪಾವತಿ ಸಂದರ್ಭದಲ್ಲಿ ಬೆದರಿಕೆ ಹಾಕಬಾರದು ಎಂದು ಉಡುಪಿ- ಚಿಕ್ಕಮಗಳೂರು ಸಂಸದ ಕೋಟಾ ಶ್ರೀನಿವಾಸ ಪೂಜಾರಿ ಹೇಳಿದ್ದಾರೆ. ಸಾಲ ಮರುಪಾವತಿಗೆ ಬ್ಯಾಂಕ್ ಸಮಯ ನೀಡಬೇಕು, ಬೆದರಿಕೆ ಒಡ್ಡಿದರೆ ಕೇಂದ್ರ ಹಣಕಾಸು ಸಚಿವರಿಗೆ ದೂರು ನೀಡಲಾಗುವುದು ಎಂದು ಅವರು ತಿಳಿಸಿದ್ದಾರೆ.

೨. ೮೭ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಜಾಗೃತಿಗಾಗಿ ಕನ್ನಡ ಜ್ಯೋತಿ ರಥಯಾತ್ರೆ ಅಕ್ಟೋಬರ್ ೧೪ ಮತ್ತು ೧೫ರಂದು ಎರಡು ದಿನಗಳ ಕಾಲ ಜಿಲ್ಲೆಯಲ್ಲಿ ಸಂಚರಿಸಲಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಯಶಸ್ವಿಗೆ ಸಹಕರಿಸಬೇಕು ಎಂದು ಯಾದಗಿರಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಸಿದ್ದಪ್ಪ ಎಸ್.ಹೊಟ್ಟಿ ಹೇಳಿದರು.

೩. ಇದೇ ೧೫ ರಂದು ಬೆಂಗಳೂರಿನ ನಿಮ್ಹಾನ್ಸ್ ಕನ್ವೆನ್ಷನ್ ಸೆಂಟರ್‌ನಲ್ಲಿ ನಿಮ್ಹಾನ್ ಮಾನಸಿಕ ಆರೋಗ್ಯ ಸಂತೆ ೩.೦ ಆಯೋಜಿಸಲಾಗಿದೆ. ಮಾನಸಿಕ ಆರೋಗ್ಯದ ಬಗ್ಗೆ ಜಾಗೃತಿ ಮೂಡಿಸಲು ಹಾಗೂ ಆತ್ಮಹತ್ಯೆ ತಡೆಗಟ್ಟುವಿಕೆ ಕುರಿತಂತೆ ಜಾಗೃತಿ ಮೂಡಿಸಲು ನಿರ್ಧರಿಸಲಾಗಿದೆ.

**<><*<><>*><>**

ಹಾವೇರಿ ಜಿಲ್ಲೆಯಾದ್ಯಂತ ಧಾರಾಕಾರ ಮಳೆಯಾಗಿದೆ. ಮಳೆಯಿಂದಾಗಿ ೪೭ ಮನೆಗಳಿಗೆ ಹಾನಿ ಸಂಭವಿಸಿದ್ದು, ಜನಜೀವನ ಅಸ್ತವ್ಯಸ್ತಗೊಂಡಿದೆ. ಜಿಲ್ಲೆಯ ಸವಣೂರು ತಾಲೂಕಿನ ಕಳಸೂರಿನಲ್ಲಿ ಸುರಿದ ಮಳೆಗೆ ವರದಾ ನದಿಗೆ ನಿರ್ಮಿಸಿರುವ ಬ್ರಿಡ್ಜ್ ಕಂ ಬ್ಯಾರೇಜ್ ಮುಳುಗಡೆಯಾಗಿದೆ. ಜಿಲ್ಲೆಯಲ್ಲಿ ಹರಿಯುವ ತುಂಗಭದ್ರಾ, ವರದಾ, ಕುಮದ್ವತಿ ನದಿಗಳು ಹಾಗೂ ಹಳ್ಳಗಳಲ್ಲಿ ನೀರಿನ ಮಟ್ಟ ಏರಿಕೆಯಾಗಿದೆ. ಮಳೆಯಿಂದಾಗಿ ಕಟಾವಿಗೆ ಬಂದಿದ್ದ ಶೇಂಗಾ, ಸೋಯಾಬಿನ್, ಮೆಕ್ಕೆಜೋಳ, ಹತ್ತಿ ಸೇರಿದಂತೆ ವಿವಿಧ ಬೆಳೆಗಳಿಗೆ ಹಾನಿ ಸಂಭವಿಸಿದೆ. ಮಳೆಯಿಂದ ಹಾವೇರಿಯ ಹಳೇ ರಾಷ್ಟ್ರೀಯ ಹೆದ್ದಾರಿ ರಸ್ತೆ ಹಾಗೂ ಹಲವು ರಸ್ತೆಗಳಲ್ಲಿ ನೀರು ನಿಂತಿದ್ದು, ಸ್ಥಳಕ್ಕೆ ಜಿಲ್ಲಾಧಿಕಾರಿ ವಿಜಯ ಮಹಾಂತೇಶ ದಾನಮ್ಮನವರ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಗ್ಯಾಸ್ ಪೈಪ್‌ಲೈನ್ ಅಳವಡಿಕೆಗಾಗಿ ತೆಗೆದಿರುವ ಜಾಗದಲ್ಲಿ ಉಂಟಾಗಿರುವ ಗುಂಡಿಗಳನ್ನು ವೈಜ್ಞಾನಿಕವಾಗಿ ಮುಚ್ಚುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ದಾವಣಗೆರೆ ಜಿಲ್ಲೆಯಲ್ಲೂ ವ್ಯಾಪಕ ಮಳೆ ಸುರಿಯುತ್ತಿದ್ದು, ಕೆರೆ, ಕಟ್ಟೆ, ಚೆಕ್ ಡ್ಯಾಂಗಳು ತುಂಬಿವೆ. ಕಳೆದ ರಾತ್ರಿ ಸುರಿದ ಭಾರಿ ಮಳೆಗೆ ಮಾಯಕೊಂಡ ಹೋಬಳಿ ವ್ಯಾಪ್ತಿಯ ಹೆಚ್.ರಾಂಪುರ ಗ್ರಾಮದ ಕೆರೆ ಸಂಪೂರ್ಣ ಭರ್ತಿಯಾಗಿ ಕೋಡಿಯಲ್ಲಿ ನೀರು ಹರಿದು ಹೋಗುತ್ತಿದೆ. ನ್ಯಾಮತಿ, ಬಸವಾಪಟ್ಟಣ, ಚನ್ನಗಿರಿ ಸೇರಿದಂತೆ ಜಿಲ್ಲೆಯ ಹಲವು ಗ್ರಾಮಗಳಲ್ಲಿ ಗುಡುಗು-ಸಿಡಿಲು ಸಹಿತ ಭಾರಿ ಮಳೆಯಾಗಿದ್ದು, ಭತ್ತ ಮತ್ತು ಕೊಯ್ಲಿಗೆ ಬಂದಿದ್ದ ಮೆಕ್ಕೆಜೋಳದ ಬೆಳೆ ಹಾನಿ ಸಂಭವಿಸಿದೆ.

**<><*<><>*><>**

ಇನ್ನು ಹವಾವರ್ತಮಾನ...

ನೈಋತ್ಯ ಮುಂಗಾರು ದಕ್ಷಿಣ ಒಳನಾಡಿನಲ್ಲಿ ಸಕ್ರಿಯವಾಗಿದ್ದು, ಉತ್ತರ ಒಳನಾಡು ಮತ್ತು ಕರಾವಳಿ ಕರ್ನಾಟಕದಲ್ಲಿ ದುರ್ಬಲವಾಗಿತ್ತು. ಕರಾವಳಿ ಹಾಗೂ ದಕ್ಷಿಣ ಒಳನಾಡಿನ ಹಲವು ಸ್ಥಳಗಳಲ್ಲಿ ಮಳೆಯಾಗಿದೆ. ಚಿತ್ರದುರ್ಗದ ನಾಯಕನಟ್ಟಿ ೬ ಸೆಂಟಿ ಮೀಟರ್, ಕೊಟ್ಟಿಗೆಹಾರದಲ್ಲಿ ೭ ಸೆಂಟಿ ಮೀಟರ್ ಮಳೆಯಾಗಿದೆ. ಇಂದು ಕರಾವಳಿ ಜಿಲ್ಲೆಗಳಲ್ಲಿ ಹಗುರದಿಂದ ಸಾಧಾರಣ ಮಳೆಯಾಗುವ ಸಂಭವ. ಬೆಳಗಾವಿ, ಹಾವೇರಿ, ಬಳ್ಳಾರಿ, ದಾವಣಗೆರೆ, ಚಿತ್ರದುರ್ಗ ಜಿಲ್ಲೆಗಳಲ್ಲಿ ಗುಡುಗು ಸಹಿತ ಮಳೆಯಾಗುವ ಸಾಧ್ಯತೆಯಿದೆ. ರಾಜಧಾನಿ ಬೆಂಗಳೂರಿನಲ್ಲೂ ಮೋಡಕವಿದ ವಾತಾವರಣವಿದ್ದು, ಗುಡುಗು ಸಹಿತ ಭಾರೀ ಮಳೆಯಾಗುವ ಸಾಧ್ಯತೆಯಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**